ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 73

ಮಾನ್ಯ ಸದಸ್ಯರ ಹೆಸರು : ಶ್ರೀ ಆರ್.ಬಿ.ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಪ್ರವಾಸೋದ್ಯಮ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಉತ್ತರಿಸುವ ದಿನಾಂಕ : 13-12-2021

****

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಪ್ರವಾಸೋದ್ಯಮ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ನೀಡಲಾಗುತ್ತಿರುವ ಸೌಲಭ್ಯಗಳೇನು;	ಪ್ರವಾಸೋದ್ಯಮ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗೆ ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ. 1) ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆ ಅಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ನಿರುದ್ಯೋಗಿ ಅಭ್ಯರ್ಥಿಗಳಿಗೆ ರೂ.3.00 ಲಕ್ಷಗಳ ಸಹಾಯಧನದೊಂದಿಗೆ ಪ್ರವಾಸಿ ಟ್ಯಾಕ್ಸಿ ವಿತರಿಸುವ ಕಾರ್ಯಕ್ರಮ. 2) ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆ ಅಡಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಹಾಗೂ ಮೊರಾರ್ಜಿ ದೇಸಾಯಿ ಹಾಗೂ ಕ್ರೈಸ್ ವಸತಿ ಶಾಲೆಗಳಲ್ಲಿ 8ನೇ ತರಗತಿಯಲ್ಲಿ ಕಲಿಯುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಕರ್ನಾಟಕ ದರ್ಶನ ಪ್ರವಾಸ ಕಾರ್ಯಕ್ರಮ. ಸದರಿ ಕಾರ್ಯಕ್ರಮವನ್ನು ನೋಡಲ್ ಏಜನ್ಸಿಯಾದ ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಟಿ.ಡಿ.ಸಿ., ಬೆಂಗಳೂರು ಅವರಿಂದ ರಾಜ್ಯ ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್/ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಅವರ ಸಹಯೋಗದೊಂದಿಗೆ ಈ ಕಾರ್ಯಕ್ರಮವನ್ನು ಜಾರಿಗೊಳಿಸಲಾಗುತ್ತಿತ್ತು. (ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಈ ಕಾರ್ಯಕ್ರಮವನ್ನು 2021-22ನೇ ಸಾಲಿನಿಂದ ಪ್ರವಾಸೋದ್ಯಮ ಇಲಾಖೆಯು ಕೈಗೊಂಡಿರುವುದಿಲ್ಲ).

<table>
<tr>
<td>ಆ)</td>
<td>ಸದರಿ ಇಲಾಖೆಯಲ್ಲಿ ಇದಕ್ಕಾಗಿ ಒದಗಿಸಲಾಗಿರುವ ಅನುದಾನವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು;</td>
<td>
2021-22ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆ ಅಡಿ ಪ್ರವಾಸೋದ್ಯಮ ಇಲಾಖೆಗೆ ಈ ಕೆಳಕಂಡ ಲೆಕ್ಕಶೀರ್ಷಿಕೆ ಅಡಿ ಅನುದಾನವನ್ನು ಒದಗಿಸಲಾಗಿದೆ.
(ರೂ.ಲಕ್ಷಗಳಲ್ಲಿ)
<table>
<tr><th>ಕ್ರ. ಸಂ</th><th>ಯೋಜನೆ ಮತ್ತು ಲೆಕ್ಕಶೀರ್ಷಿಕೆ</th><th>ಒದಗಿಸಿರುವ ಅನುದಾನ</th><th>ಬಿಡುಗಡೆ ಮಾಡಿರುವ ಅನುದಾನ</th></tr>
<tr><td>1</td><td>ಪರಿಶಿಷ್ಟ ಜಾತಿ ಉಪಯೋಜನೆ 3452-80-104-0-01-422</td><td>292.00</td><td>224.75</td></tr>
<tr><td>2</td><td>ಗಿರಿಜನ ಉಪಯೋಜನೆ 3452-80-104-0-01-423</td><td>195.00</td><td>93.75</td></tr>
<tr><td></td><td>ಒಟ್ಟು</td><td>487.00</td><td>318.50</td></tr>
</table>
</td>
</tr>
<tr>
<td>ಇ)</td>
<td>ಎಷ್ಟು ಜನ ಫಲಾನುಭವಿಗಳು ಇದರ ಲಾಭವನ್ನು ಪಡೆದುಕೊಂಡಿದ್ದಾರೆ?</td>
<td>
2019-20ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆ ಅಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಸಹಾಯಧನದೊಂದಿಗೆ ಪ್ರವಾಸಿ ಟ್ಯಾಕ್ಸಿ ವಿತರಿಸುವ ಕಾರ್ಯಕ್ರಮಕ್ಕೆ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಇಲಾಖೆಯು ನಿಗದಿಪಡಿಸಿರುವ ಒಟ್ಟು 262 ಗುರಿಗಳ ಪೈಕಿ 125 ಫಲಾನುಭವಿಗಳು ಇದರ ಲಾಭವನ್ನು ಪಡೆದಿರುತ್ತಾರೆ. ಬಾಕಿ ಇರುವ 137 ಗುರಿಗಳಿಗೆ, ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಪ್ರಸಕ್ತ ಸಾಲಿನಲ್ಲಿ ಸಾಧಿಸಲು ಕ್ರಮವಹಿಸಲಾಗುತ್ತಿದೆ.
<table>
<tr><th colspan="3">ಪರಿಶಿಷ್ಟ ಜಾತಿ</th><th colspan="3">ಪರಿಶಿಷ್ಟ ಪಂಗಡ</th><th colspan="3">ಒಟ್ಟು</th></tr>
<tr><th>ಗುರಿ</th><th>ಸಾಧನೆ</th><th>ಬಾಕಿ</th><th>ಗುರಿ</th><th>ಸಾಧನೆ</th><th>ಬಾಕಿ</th><th>ಗುರಿ</th><th>ಸಾಧನೆ</th><th>ಬಾಕಿ</th></tr>
<tr><td>190</td><td>90</td><td>100</td><td>72</td><td>35</td><td>37</td><td>262</td><td>125</td><td>137</td></tr>
</table>
2019-20ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆ ಅಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಪ್ರವಾಸಿ ಟ್ಯಾಕ್ಸಿ ವಿತರಿಸಲು 30 ಜಿಲ್ಲೆಗಳ ಪೈಕಿ 9 ಜಿಲ್ಲೆಗಳಿಗೆ ನಿಗದಿಪಡಿಸಿರುವ ಪೂರ್ಣ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಆದರೆ, 4ನೇ ತ್ರೈಮಾಸಿಕದಲ್ಲಿ ಅನುದಾನವು ಲಭ್ಯವಿರದ ಕಾರಣ, ಇನ್ನುಳಿದ 21 ಜಿಲ್ಲೆಗಳಿಗೆ ಬಿಡುಗಡೆ ಮಾಡಲು ಬಾಕಿ ಇರುವ ರೂ.318.50ಲಕ್ಷಗಳ ಅನುದಾನವನ್ನು 2021-22ನೇ ಸಾಲಿನಲ್ಲಿ ಬಿಡುಗಡೆ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ.
</td>
</tr>
</table>

ಸಂಖ್ಯೆ: ಟಿಒಆರ್ 291 ಟಿಡಿವಿ 2021

(ಆನಂದ್ ಸಿಂಗ್)
ಪ್ರವಾಸೋದ್ಯಮ ಹಾಗೂ ಪರಿಸರ ಮತ್ತು
ಜೀವಿಶಾಸ್ತ್ರ ಸಚಿವರು